# ಕರ್ನಾಟಕ ವಿಧಾನಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 640 |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)<br>(ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 13-12-2024 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ<br>ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರವರ್ಗ-1ರ ಹಿಂದುಳಿದ ಜಾತಿಗಳಿಗೆ ಪರಿಶಿಷ್ಟ ಜಾತಿ / ಪ್ರವರ್ಗ-1ರ ಜನಾಂಗದವರಿಗೆ ನೀಡುವ ಸೌಲಭ್ಯಗಳನ್ನು ಸಮಾನಾಂತರವಾಗಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದಲ್ಲಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; | ಭಾರತದ ಸಂವಿಧಾನ ಅನುಚ್ಛೇಧ-46 ರನ್ವಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ವಿಶೇಷ ಅನುಬಂಧವನ್ನು ಕಲ್ಪಿಸಲಾಗಿದ್ದು, ಆದರೆ ಹಿಂದುಳಿದ ವರ್ಗಗಳಿಗೆ ಸೇರಿದ ಪ್ರವರ್ಗ-1ಕ್ಕೆ ಸಂವಿಧಾನಿಕ ಸ್ಥಾನಮಾನ ಕಲ್ಪಿಸಿರುವುದಿಲ್ಲ.<br><br>ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ವಿವಿಧ ಆಯೋಗಳ ವರದಿಗಳನ್ವಯ ಪ್ರವರ್ಗ-1ರಡಿಯ ಜಾತಿಗಳು ಅತೀ ಹಿಂದುಳಿದವುಗಳಾಗಿದ್ದು, ಸದರಿ ವರದಿಗಳನ್ವಯ ಪ್ರವರ್ಗ-1ಕ್ಕೆ ಶೈಕ್ಷಣಿಕ ಸಂಸ್ಥೆಗಳ ಪ್ರವೇಶಾವಕಾಶದಲ್ಲಿ ಹಾಗೂ ನೇರ ನೇಮಕಾತಿಯ ಮೀಸಲಾತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮಾದರಿಯಲ್ಲಿಯೇ ಕೆನೆಪದರ ನೀತಿಯಿಂದ ವಿನಾಯಿತಿ ನೀಡಲಾಗಿರುತ್ತದೆ.<br><br>ಮುಂದುವರೆದು ಹಿಂದುಳಿದ ವರ್ಗಗಳ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಅಭಿವೃದ್ಧಿ ಯೋಜನೆಗಳಲ್ಲಿ ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿ / ಫಲಾನುಭವಿಗಳಿಗೆ ಅರ್ಜಿ ಸಲ್ಲಿಸಲು ಇತರೆ ಹಿಂದುಳಿದ ವರ್ಗಗಳಿಗಿಂತ ಹೆಚ್ಚಿನ ಆದಾಯ ಮಿತಿಯನ್ನು ನೀಡಲಾಗುತ್ತಿರುತ್ತದೆ.<br><br>ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಬಿವೃದ್ಧಿ ನಿಗಮವು ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆ ಗಳಡಿಯಲ್ಲಿ ಪ್ರವರ್ಗ- 1 ಮತ್ತು 2(ಎ)ಗೆ ಶೇಕಡಾ 85% ರಷ್ಟು ಮೀಸಲಾತಿಯನ್ನು ಪ್ರವರ್ಗ-3(ಎ), ಪ್ರವರ್ಗ-3(ಬಿ) ಗೆ ಶೇಕಡಾ 15% ರಷ್ಟು ಮೀಸಲಾತಿ ಅನುಪಾತವನ್ನು ಅನುಸರಿಸಲಾಗುತ್ತಿದೆ.<br><br>ಪ್ರವರ್ಗ-1ರಡಿ ಬರುವ ಜಾತಿಗಳ ಪೈಕಿ ಈ ಕೆಳಕಂಡ ಜಾತಿಗಳಿಗೆ ಪ್ರತ್ಯೇಕ ನಿಗಮವನ್ನು ಸ್ಥಾಪಿಸಿ ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಿಸಲಾಗುತ್ತಿದೆ.<br><br>1. ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಬಿವೃದ್ಧಿ ನಿಗಮ.<br>2. ನಿಜಶರಣರ ಅಂಭಿಗರ ಚೌಡಯ್ಯ ಅಭಿವೃದ್ಧಿ ನಿಗಮ.<br>3. ಕರ್ನಾಟಕ ಉಪ್ಪಾರ ಸಮುದಾಯಗಳ ಅಬಿವೃದ್ಧಿ ನಿಗಮ.<br>4. ಕಾಡುಗೊಲ್ಲ ಅಭಿವೃದ್ಧಿ ನಿಗಮ. |

| | | |
|---|---|---|
| (ಆ) | 1977ರಲ್ಲಿ ಜಾರಿಗೆ ಬಂದ ಹಾವನೂರು ಆಯೋಗದಲ್ಲಿ ಬಿ ಟಿ ಜನಾಂಗಕ್ಕೆ ನೀಡುತ್ತಿದ್ದ ಸೌಲಭ್ಯಗಳನ್ನು ತೆಗೆದು ಹಾಕಲು ಕಾರಣಗಳೇನು | 1977ರಲ್ಲಿ ಜಾರಿಗೆ ಬಂದ ಹಾವನೂರು ಆಯೋಗದ ವರದಿಯನ್ವಯ ಬಿಟಿ (ಹಿಂದುಳಿದ ಪಂಗಡ) ಎಂಬುದಾಗಿ ನಮೂದಿಸಲಾಗಿರುತ್ತದೆ. ನಂತರದಲ್ಲಿ ಜಾರಿಗೆ ಬಂದ ವಿವಿಧ ಆಯೋಗದ ವರದಿಗಳನ್ವಯ ಸದರಿ ಬಿಟಿ ಜನಾಂಗದಡಿ ನಮೂದಿಸಿದ್ದ ಕೆಲವು ಜಾತಿಗಳನ್ನು ಹೊರತುಪಡಿಸಿ, ಉಳಿದ ಜಾತಿಗಳನ್ನು ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30-03-2002ರನ್ವಯ 'ಪ್ರವರ್ಗ-1' ರಡಿ ಮುಂದುವರೆಸಲಾಗಿರುತ್ತದೆ. |
| (ಇ) | ಪ್ರಸ್ತುತ ಪ್ರವರ್ಗ-1ರ ಜಾತಿಗಳಿಗೆ ಸೌಲಭ್ಯಗಳನ್ನು ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು? | ಹಿಂದುಳಿದ ವರ್ಗಗಳ ಪ್ರವರ್ಗ-1ರ ಅಡಿಯಲ್ಲಿ ಬರುವ ಜಾತಿಗಳಿಗೆ ಸಂವಿಧಾನ ಅನುಚ್ಛೇದ 15(4) ಮತ್ತು16(4)ರ ಅನ್ವಯ ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುವ ಶೈಕ್ಷಣಿಕ ಸಂಸ್ಥೆಗಳಲ್ಲಿ ಹಾಗೂ ಉದ್ಯೋಗ ನೇಮಕಾತಿಗಳಲ್ಲಿ ಮೀಸಲಾತಿ ಸೌಲಭ್ಯಗಳನ್ನು ಕಲ್ಪಿಸಲಾಗಿರುತ್ತದೆ. ಅದರಂತೆ ಶೇಕಡ 4 ರಷ್ಟು ಮೀಸಲಾತಿ ಸೌಲಭ್ಯವನ್ನು ನೀಡಲಾಗಿದೆ ಮತ್ತು ಪ್ರವರ್ಗ-1ರಲ್ಲಿ ಬರುವ ಸಮುದಾಯಗಳಿಗೆ ಕೆನೆಪದರ ನೀತಿಯಿಂದ ವಿನಾಯಿತಿಯನ್ನು ನೀಡಲಾಗಿರುತ್ತದೆ.<br><br>ಹಿಂದುಳಿದ ವರ್ಗಗಳ ಇಲಾಖೆಯಿಂದ ಅನುಷ್ಠಾನ ಗೊಳಿಸುತ್ತಿರುವ ವಿವಿಧ ಅಭಿವೃದ್ಧಿ ಯೋಜನೆಗಳಲ್ಲಿ ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿ / ಫಲಾನುಭವಿಗಳಿಗೆ ಅರ್ಜಿಸಲ್ಲಿಸಲು ಇತರೆ ಹಿಂದುಳಿದ ವರ್ಗಗಳಿಗಿಂತ ಹೆಚ್ಚಿನ ಆದಾಯ ಮಿತಿಯನ್ನು (ರೂ.2.50 ಲಕ್ಷಗಳು) ನೀಡಲಾಗು ತ್ತಿರುತ್ತದೆ. ಇದರಿಂದ ಹಿಂದುಳಿದ ವರ್ಗಗಳ ಇತರೆ ಪ್ರವರ್ಗಗಳಿಗೆ (ರೂ.1.00 ಲಕ್ಷಗಳು) ಹೋಲಿಸಿದಲ್ಲಿ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಹೆಚ್ಚಿನ ಆದ್ಯತೆ ದೊರಕಿದಂತಾಗುತ್ತದೆ.<br><br>ಹಿಂದುಳಿದ ವರ್ಗಗಳ ಸೇರಿದ ಸಂಘ ಸಂಸ್ಥೆಗಳಿಗೆ ಸಮುದಾಯ ಭವನ / ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕೆ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಆಯವ್ಯಯದಲ್ಲಿ ಹಂಚಿಕೆ ಯಾಗುವ ಅನುದಾನದ ಶೇಕಡ 70% ರಷ್ಟನ್ನು ಪ್ರವರ್ಗ-1 ಹಾಗೂ ಪ್ರವರ್ಗ-2(ಎ) ಸಮುದಾಯಕ್ಕೆ ಹಾಗೂ ಶೇಕಡ 30% ರಷ್ಟನ್ನು ಪ್ರವರ್ಗ-3(ಎ) ಹಾಗೂ ಪ್ರವರ್ಗ-3(ಬಿ) ಸಮುದಾಯಕ್ಕೆ ಹಂಚಿಕೆ ಮಾಡಲಾಗುತ್ತಿದೆ. (ವಿಶೇಷ ಸಂದರ್ಭದಲ್ಲಿ ಈ ಷರತ್ತನ್ನು ಸಡಿಲಗೊಳಿಸಿ ಸರ್ಕಾರ ಹೆಚ್ಚುವರಿ ಹಂಚಿಕೆ ಮಾಡಬಹುದಾಗಿರುತ್ತದೆ.)<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 44 ಶಾಸನ 2023, ದಿನಾಂಕ:10-06-2024ರನ್ವಯ ನಿರ್ಮಾಣ ಕಾಮಗಾರಿಗಳ ಮೌಲ್ಯ ಒಂದು ಕೋಟಿ ರೂಪಾಯಿಗಳಿಗೆ ಮೀರದ ಅಂಥ ಕಾಮಗಾರಿಗಳ ಸಂಖ್ಯೆಯ ಶೇಕಡ 4% ರಷ್ಟನ್ನು ಮೀರದಂತೆ ಹಿಂದುಳಿದ ವರ್ಗಗಳ ಪ್ರುರ್ವ-1 ರಡಿ ಬರುವ ಸಮುದಾಯಗಳಿಗೆ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ. |

...3..

| | | |
|---|---|---|
| | | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಬಿವೃದ್ಧಿ ನಿಗಮವು ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳಡಿಯಲ್ಲಿ ಪ್ರವರ್ಗ- 1 ಮತ್ತು 2(ಎ) ಗೆ ಶೇಕಡಾ 85% ರಷ್ಟು ಮೀಸಲಾತಿಯನ್ನು ಪ್ರವರ್ಗ-3(ಎ), ಪ್ರವರ್ಗ-3(ಬಿ)ಗೆ ಶೇಕಡ 15% ರಷ್ಟು ಮೀಸಲಾತಿ ಅನುಪಾತವನ್ನು ಅನುಸರಿಸಲಾಗುತ್ತಿದೆ.<br><br>ಈ ಕೆಳಕಂಡ ಸಮುದಾಯಗಳಿಗೆ ಪ್ರತ್ಯೇಕ ನಿಗಮವನ್ನು ಸ್ಥಾಪಿಸಿ ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಿಸಲಾಗುತ್ತಿದೆ.<br><br>1. ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಬಿವೃದ್ಧಿ ನಿಗಮ.<br>2. ನಿಜಶರಣರ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ.<br>3. ಕರ್ನಾಟಕ ಉಪ್ಪಾರ ಸಮುದಾಯಗಳ ಅಬಿವೃದ್ಧಿ ನಿಗಮ.<br>4. ಕಾಡುಗೊಲ್ಲ ಅಭಿವೃದ್ಧಿ ನಿಗಮ.<br><br>ಮೇಲ್ಕಂಡ ಅಭಿವೃಧ್ಧಿ ನಿಗಮಗಳಲ್ಲಿ ಪ್ರವರ್ಗ-1ರಲ್ಲಿ ಬರುವ ಸಮುದಾಯಗಳ ಅಭಿವೃಧ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಟಾನ ಗೊಳಿಸಲಾಗುತ್ತಿದೆ.<br><br>1. ಸ್ವಯಂ ಉದ್ಯೋಗ ನೇರ ಸಾಲ ಯೋಜನೆ<br>2. ಅರಿವು ಶೈಕ್ಷಣಿಕ ಸಾಲ ಯೋಜನೆ<br>3. ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ<br>4. ಗಂಗಾ ಕಲ್ಯಾಣ ನೀರಾವರಿ ಯೋಜನೆ<br>5. ಸ್ವಾವಲಂಬಿ ಸಾರಥಿ ಯೋಜನೆ<br>6. ಬ್ಯಾಂಕ್‌ಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ. |

**ಸಂಖ್ಯೆ:ಹಿಂವಕ 348 ಬಿಸಿಎ 2024**

**(ಶಿವರಾಜ.ಎಸ್.ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.